ಪ್ರಾಥಮಿಕ ಆರೋಗ್ಯ ಕೇಂದ್ರದ ದುರಸ್ತಿ

2769 (3309), ಶ್ರೀ ಭರಮಗೌಡ (ರಾಜು) ಹಾಲಗೌಡ ಕಾಗೆ (ಕಾಗವಾಡ)

ಅ) ಕಾಗವಾಡ ಕ್ಷೇತ್ರದ ಉಗಾರಖುರ್ದ್ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸದರಿ ಆರೋಗ್ಯ ಕೇಂದ್ರದ ದುರಸ್ತಿ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು; (ಸಂಪೂರ್ಣ ವಿವರ ನೀಡುವುದು);

ಇ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದ ಜಾಗವು ಒತ್ತುವರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮವೇನು; (ವಿವರ ನೀಡುವುದು)?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಉಗಾರಖುರ್ದ್ ಗ್ರಾಮದಲ್ಲಿ 2004ರಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹೊಸ ಕಟ್ಟಡವನ್ನು ನಿರ್ಮಾಣ ಮಾಡಲಾಗಿದೆ. ಸದರಿ ಕಟ್ಟಡಕ್ಕೆ ಮಾರ್ಚ್–2014ರಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ಛಾವಣಿ ದುರಸ್ಥಿ ಮಾಡಲಾಗಿರುತ್ತದೆ.

ಆ) ಉಳಿದಂತೆ ಕಟ್ಟಡದ ಸಣ್ಣ ಪುಟ್ಟ ನಿರ್ವಹಣೆಯನ್ನು ಕಾಲ ಕಾಲಕ್ಕೆ ಕೈಗೊಳ್ಳಲು ಕ್ರಮ ವಹಿಸಲಾಗುವುದು.

ಇ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಈ ವಿಷಯದ ಬಗ್ಗೆ ಗಮನ ಹರಿಸಿ ಮುಂದಿನ ಸೂಕ್ತ ಕ್ರಮ ವಹಿಸಲಾಗುವುದು.